ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕೋಲಾರ ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳ ಬಗ್ಗೆ

ಶ್ರೀ ಗೋವಿಂದ ರಾಜು(ವಿಧಾನಸಭೆಯಿಂದ ಚುನಾಯಿತರಾದವರು) –

293 (334) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೋಲಾರ ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದಗಳವಾರು ವಿವರಗಳನ್ನು ನೀಡುವುದು)

(ಆ) ಇವುಗಳಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು ಯಾವುವು ಮತ್ತು ಖಾಲಿ ಇರುವ ಹುದ್ದೆಗಳು ಯಾವುವು; (ವೃಂದಗಳವಾರು ವಿವರಗಳನ್ನು ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರಕ್ಕಿರುವ ತೊಂದರೆಗಳೇನು;

(ಈ) ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರ ಹಾಗೂ ಕಛೇರಿ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗಾಗಿ ಭರ್ತಿ ಮಾಡಲಾಗುವುದು; (ವಿವರಗಳನ್ನು ನೀಡುವುದು)

(ಉ) ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವ ಕಾರಣಕ್ಕಾಗಿ ಸ್ಥಗಿತಗೊಳಿಸಲಾಗಿದೆ? (ವಿವರಗಳನ್ನು ನೀಡುವುದು)